# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2436 |
| ಸದಸ್ಯರ ಹೆಸರು | ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 27.03.2026 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ಆಯೋಗದ ಮೂಲಕ ಪಡೆದಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಅನುಸರಿಸಿ ಹಿಂದುಳಿದ ವರ್ಗಗಳ ಮೀಸಲಾತಿಯ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಇದನ್ನು ಯಾವಾಗ ಜಾರಿಗೊಳಿಸಲಾಗುವುದು; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ಎಲ್ಲಾ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷ-2025ರಲ್ಲಿ ಎಲ್ಲಾ ಜಾತಿಗಳ ಸಾಮಾಜಿಕ ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಅಂಕಿ-ಅಂಶಗಳನ್ನು ಸಂಗ್ರಹಿಸಲಾಗಿದೆ. ವರದಿ ತಯಾರಿಕೆ ಕಾರ್ಯ ಪ್ರಗತಿಯಲ್ಲಿರುತ್ತದೆ. |
| ಆ) | ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ನೀಡುವಾಗ ವರ್ಗವಾರು ಪ್ರವೇಶ ನೀಡುತ್ತಿಲ್ಲ. ಇದರಿಂದ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಅನ್ಯಾಯ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಸ್ತುತ ಪ್ರವರ್ಗ-1, ಪ್ರವರ್ಗ-2ಎ, ಮತ್ತು ಪ್ರವರ್ಗ-2ಬಿ, ಸಮುದಾಯಗಳಿಗೆ ಹಿಂದುಳಿದ ವರ್ಗಗಳ ವಸತಿ ನಿಲಯದಲ್ಲಿ ಯಾವ ಪ್ರಮಾಣದಲ್ಲಿ ಪ್ರವೇಶ ನೀಡಲಾಗುತ್ತಿದೆ; ಇನ್ನು ಹೆಚ್ಚಿಸುವ ಉದ್ದೇಶ ಸರ್ಕಾರದ ಮುಂದೆ ಇರುತ್ತದೆಯೇ: | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ಪೂರ್ವ / ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಸಕಇ 79 ಬಿಎಂಎಸ್ 95, ದಿನಾಂಕ:30.08.1995 ರಲ್ಲಿ ಈ ಕೆಳಕಂಡಂತೆ ಪ್ರವರ್ಗವಾರು ಮೀಸಲಾತಿಯನ್ನು ನಿಗದಿಪಡಿಸಲಾಗಿದೆ.<br>ಮೆಟ್ರಿಕ್-ಪೂರ್ವ / ಮೆಟ್ರಿಕ್-ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿ ನಿಗದಿಪಡಿಸಿದ ಪ್ರವರ್ಗವಾರು ಮೀಸಲಾತಿ ವಿವರ ಈ ಕೆಳಕಂಡಂತಿದೆ. |

| ಕ್ರ.ಸಂ | ಪ್ರವರ್ಗ | ಶೇಕಡವಾರು |
|---|---|---|
| 1 | ಪ್ರವರ್ಗ-1 | 10% |
| 2 | ಪ್ರವರ್ಗ-2ಎ | 35% |
| 3 | ಪ್ರವರ್ಗ-2ಬಿ | 09% |
| 4 | ಪ್ರವರ್ಗ-3ಎ | 09% |
| 5 | ಪ್ರವರ್ಗ-3ಬಿ | 12% |
| 6 | ಪರಿಶಿಷ್ಟ ಜಾತಿ | 21% |
| 7 | ಪರಿಶಿಷ್ಟ ಪಂಗಡ | 04% |
| | **ಒಟ್ಟು** | **100** |

ಸದರಿ ಮೀಸಲಾತಿಯಂತೆ ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ಪ್ರವೇಶ ನೀಡಲಾಗುತ್ತಿದೆ.

| | | |
|---|---|---|
| ಇ) | ಹಿಂದುಳಿದ ವರ್ಗಗಳ ವಸತಿ ನಿಲಯ ಮತ್ತು ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಭೋಜನ ವೆಚ್ಚಕ್ಕೆ ನೀಡುತ್ತಿರುವ ಅನುದಾನ / ಸಹಾಯಧನ ಎಷ್ಟು; ಇದನ್ನು ಹೆಚ್ಚಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ, ಯಾವಾಗ ಜಾರಿಗೊಳಿಸಲಾಗುವುದು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1750/- ವೆಚ್ಚದಲ್ಲಿ 10 ತಿಂಗಳಿಗೆ ಭೋಜನ ವೆಚ್ಚ ಹಾಗೂ ಮೆಟ್ರಿಕ್- ನಂತರದ ವಿದ್ಯಾರ್ಥಿ ನಿಲಯಗಳ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.1850/- ವೆಚ್ಚದಲ್ಲಿ 12 ತಿಂಗಳಿಗೆ ಭೋಜನ ವೆಚ್ಚವನ್ನು ನೀಡಲಾಗುತ್ತಿದೆ.<br>**ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ**<br>2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 166 ರಲ್ಲಿ ಪ್ರತಿ ವಿಧ್ಯಾರ್ಥಿಗೆ ಪ್ರತಿ ಮಾಹೆಗೆ ರೂ.100/-ಗಳ ಬೋಜನಾ ವೆಚ್ಚವನ್ನು ಹೆಚ್ಚಿಸಿ ಪ್ರತಿ ವಿದ್ಯಾರ್ಥಿಗೆ ರೂ. 1850/-ಬೋಜನಾ ವೆಚ್ಚವನ್ನು ನಿಗದಿಪಡಿಸಲಾಗಿರುತ್ತದೆ. |
| ಈ) | ಹಿಂದುಳಿದ ವರ್ಗಗಳ ಮತ್ತು ಸಮುದಾಯಗಳ ಸಮುದಾಯ ಭವನ ಮತ್ತು ವಿದ್ಯಾರ್ಥಿ ನಿಲಯ ಕಟ್ಟಡಗಳಿಗೆ ಈ ಸಾಲಿನಲ್ಲಿ ಮಂಜೂರು ಮಾಡಿರುವ ಅನುದಾನವೆಷ್ಟು; ಬಿಡುಗಡೆ ಯಾಗಿರುವ ಅನುದಾನವೆಷ್ಟು; ಬಾಕಿ ಇರುವ ಅನುದಾನವೆಷ್ಟು; ಯಾವ ಯಾವ ಪ್ರವರ್ಗಕ್ಕೆ ಯಾವ ಯಾವ ಅನುಪಾತದಲ್ಲಿ ಅನುದಾನ / ಸಹಾಯಧನ ಬಿಡುಗಡೆ ಮಾಡಲಾಗಿರುತ್ತದೆ; (ವಿವರಗಳನ್ನು ಒದಗಿಸುವುದು) | ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ 2025-26 ನೇ ಸಾಲಿನಲ್ಲಿ ರೂ.17,492.50 ಲಕ್ಷಗಳ ಅನುದಾನವನ್ನು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ. ಈ ಪೈಕಿ ಜಿಲ್ಲಾ ಹಂತದಲ್ಲಿ ದಾಖಲೆಗಳನ್ನು ಸಲ್ಲಿಸಿರುವ ಸಂಘ-ಸಂಸ್ಥೆಗಳ ಸಮುದಾಯ ಭವನ / ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮೊದಲನೇ ಕಂತಿನ ಅನುದಾನವನ್ನಾಗಿ ರೂ.3591.50 ಲಕ್ಷಗಳನ್ನು ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಅನುದಾನ ಮಂಜೂರಾಗಿದ್ದು, ಜಿಲ್ಲಾ ಹಂತದಲ್ಲಿ ದಾಖಲೆಗಳನ್ನು ಸಲ್ಲಿಸದೇ ಇರುವ ಸಂಘ-ಸಂಸ್ಥೆಗಳಿಗೆ ಸಂಬಂಧಿಸಿದಂತೆ ಮಂಜೂರಾಗಿರುವ ಮೊತ್ತ ರೂ.3567.50 ಲಕ್ಷಗಳ ಅನುದಾನಕ್ಕೆ ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡುವುದು ಬಾಕಿ ಇರುತ್ತದೆ.<br>ಸದರಿ ಯೋಜನೆಯಡಿ ಮೂರನೇ ತ್ರೈಮಾಸಿಕದಲ್ಲಿ ಬಿಡುಗಡೆಯಾಗಿರುವ ಅನುದಾನ ರೂ.2725.00 ಲಕ್ಷಗಳನ್ನು ಪ್ರವರ್ಗ-1 ಮತ್ತು ಪ್ರವರ್ಗ-2ಎ ಗೆ ಶೇ 70% ಹಾಗೂ ಪ್ರವರ್ಗ-3ಎ ಮತ್ತು 3ಬಿ ಗೆ ಶೇಕಡ 30% ರಷ್ಟನ್ನು ಹಂಚಿಕೆ ಮಾಡಿಕೊಂಡು, ಸದರಿ ಹಂಚಿಕೆಯಾದ ಮೊತ್ತಕ್ಕೆ 70:30 ರ ಅನುಪಾತದಂತೆ ಹಂಚಿಕೆಯಾಗುವ ಮೊತ್ತವನ್ನು ಸರ್ಕಾರಿ ನಿವೇಶನದಲ್ಲಿ ನಿರ್ಮಾಣ ಮಾಡಲಾಗುತ್ತಿರುವ ಸಮುದಾಯ ಭವನಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ. |

| | | |
|---|---|---|
| | | ಪ್ರಸ್ತುತ ನಾಲ್ಕನೇ ತ್ರೈಮಾಸಿಕದಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಸಹ ಈ ಮೇಲಿನಂತೆ ಬಿಡುಗಡೆ ಮಾಡಲು ಕ್ರಮವಹಿಸಲಾಗಿರುತ್ತದೆ. |
| ಉ) | ಹಿಂದುಳಿದ ವರ್ಗಗಳ ಮತ್ತು ಸಮುದಾಯಗಳ ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹೆಣ್ಣು ಮಕ್ಕಳಿಗೆ ಹೈಟೆಕ್ ವಸತಿ ನಿಲಯಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮಹಿಳಾ ಹೈಟೆಕ್ ವಸತಿ ನಿಲಯಗಳ ನಿರ್ಮಾಣಕ್ಕೆ ಸರ್ಕಾರ ಯಾವುದಾದರು ಯೋಜನೆ ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ; ಅದರ ಮಾಹಿತಿಯನ್ನು ಒದಗಿಸುವುದು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಒಟ್ಟು 218 ವೃತ್ತಿಪರ ಕೋರ್ಸ್ ವಿದ್ಯಾರ್ಥಿನಿಲಯಗಳಿದ್ದು, ಈ ಪೈಕಿ 105 ಮೆಟ್ರಿಕ್-ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.<br>ವೃತ್ತಿಪರ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹೆಣ್ಣು ಮಕ್ಕಳಿಗೆ ಹೈಟೆಕ್ ವಸತಿ ನಿಲಯಗಳನ್ನು ಮಂಜೂರು ಮಾಡುವ ಬಗ್ಗೆ ಪ್ರಸ್ತಾವನೆ ಇರುವುದಿಲ್ಲ. |
| ಊ) | ಸರ್ಕಾರಿ ಹುದ್ದೆಗಳನ್ನು ಪಡೆಯುವ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಾರ್ಷಿಕ ಆದಾಯ ಮಿತಿಯನ್ನು 8 ಲಕ್ಷದಿಂದ 15 ಲಕ್ಷ ರೂಪಾಯಿಗಳಿಗೆ ಏರಿಕೆ ಮಾಡಲು ಹಿಂದುಳಿದ ಸಮುದಾಯಗಳು ಮನವಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕೇಂದ್ರ ಸರ್ಕಾರದ ವ್ಯಾಪ್ತಿಗೆ ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ದಿನಾಂಕ:13.09.2017 ರಿಂದ ಜಾರಿಗೆ ಬರುವಂತೆ ಪೋಷಕರ ವಾರ್ಷಿಕ ಆದಾಯ ಮಿತಿಯನ್ನು ರೂ.8.00 ಲಕ್ಷಕ್ಕೆ ನಿಗದಿಗೊಳಿಸಲಾಗಿದೆ. ಅದರಂತೆ ರಾಜ್ಯ ಸರ್ಕಾರವೂ ಸಹ ಪೋಷಕರ / ಅಭ್ಯರ್ಥಿಯ ವಾರ್ಷಿಕ ಆದಾಯ ಮಿತಿಯನ್ನು ದಿನಾಂಕ:14.09.2018 ರಿಂದ ಜಾರಿಗೆ ಬರುವಂತೆ ರೂ.8.00 ಲಕ್ಷಕ್ಕೆ ಹೆಚ್ಚಿಸಿ ಆದೇಶಿಸಲಾಗಿದೆ.<br>ಆದ್ಯಾಗ್ಯೂ ವಾರ್ಷಿಕ ಆದಾಯ ಮಿತಿಯನ್ನು ರೂ.8.00 ಲಕ್ಷದಿಂದ ರೂ.15.00 ಲಕ್ಷಕ್ಕೆ ಹೆಚ್ಚಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಹಿಂವಕ 111 ಬಿಸಿಎ 2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು